ಸಿ) ಕರೆಪತ್ರದ ಜೊತೆಗೆ ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹ ಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

## ದೇಹದಾರ್ಢ್ಯತೆ ಪರೀಕ್ಷೆ (Physical Standard Test) :

i) ಸಹಿಷ್ಣುತೆ ಪರೀಕ್ಷೆಗೆ ಅರ್ಹರಾಗಲು ಅಭ್ಯರ್ಥಿಗಳು ಈ ಕೆಳಗಿನ ಎಲ್ಲಾ ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು ಹಾಗೂ ಈ ಕೆಳಗಿನ ಎಲ್ಲಾ ದೇಹದಾರ್ಢ್ಯತೆ ಪರೀಕ್ಷೆಗಳನ್ನು ಕೆಳಗೆ ನಮೂದಿಸಿರುವ ಕ್ರಮದಲ್ಲಿಯೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಗಳಲ್ಲಿ ಭಾಗವಹಿಸದೆ ತಿರಸ್ಕರಿಸುವವರು/ ವಿಫಲವಾಗುವವರು, ಅನರ್ಹತೆಗೆ ಒಳಗಾಗುವರು. ಪ್ರತಿಯೊಂದು ದೇಹದಾರ್ಢ್ಯತೆ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಭರ್ತಿ ಮಾಡಿರುವ ವಿವರಗಳನ್ನು ಪರಿಶೀಲಿಸಿ ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ದೇಹದಾರ್ಢ್ಯತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

| **ದೇಹದಾರ್ಢ್ಯತೆ ಪರೀಕ್ಷೆ:** | | |
|---|---|---|
| **ಎಲ್ಲಾ ಸಾಮಾನ್ಯ (ಪುರುಷ), ಸೇವಾನಿರತ, ಮಾಜಿ ಸೈನಿಕ, ಮಹಿಳಾ ಮತ್ತು ತೃತೀಯ ಲಿಂಗ ಅಭ್ಯರ್ಥಿಗಳಿಗೆ** | ಕನಿಷ್ಠ ಎತ್ತರ | ಸಾಮಾನ್ಯ ಪುರುಷ ಅಭ್ಯರ್ಥಿಗಳಿಗೆ 170 ಸೆಂ.ಮೀ. ಕಡಿಮೆ ಇಲ್ಲದಂತೆ |
| | | ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅನ್ವಯಿಸುವುದಿಲ್ಲ |
| | | ಸೇವಾನಿರತ ಪುರುಷ ಅಭ್ಯರ್ಥಿಗಳಿಗೆ 168 ಸೆಂ.ಮೀ. |
| | | ಮಹಿಳಾ ಅಭ್ಯರ್ಥಿಗಳಿಗೆ 158 ಸೆ.ಮೀ. |
| | | ಸೇವಾನಿರತ ಮಹಿಳಾ ಅಭ್ಯರ್ಥಿಗಳಿಗೆ 157 ಸೆ.ಮೀ. |
| | ಎದೆ ಸುತ್ತಳತೆ (ಪುರುಷ) | 86 ಸೆಂ.ಮೀ. (ಪೂರ್ತಿ ವಿಸ್ತರಿಸಿದಾಗ)<br>ಕನಿಷ್ಠ ವಿಸ್ತರಣೆ 5 ಸೆಂ.ಮೀ. |
| | ತೂಕ (ಮಹಿಳೆಯರಿಗೆ) | 45 ಕೆ.ಜಿ. |

## ಸಹಿಷ್ಣುತೆ ಪರೀಕ್ಷೆ(Endurance Test)

| | **ಅಂಶಗಳು** | **ಅರ್ಹತಾ ವೇಳೆ** |
|---|---|---|
| **ಎಲ್ಲಾ ಸಾಮಾನ್ಯ ಪುರುಷ ಅಭ್ಯರ್ಥಿಗಳಿಗೆ** | 1600 ಮೀಟರ್ ಓಟ (ಅಭ್ಯರ್ಥಿಯು ಓಟದಲ್ಲಿ ಅರ್ಹನಾದ ನಂತರ ಮುಂದಿನ ಹಂತದ ಸಹಿಷ್ಣುತೆ ಪರೀಕ್ಷೆಗೆ ಅವಕಾಶ ಕಲ್ಪಿಸತಕ್ಕದ್ದು) | 6 ನಿಮಿಷ 30 ಸೆಕೆಂಡ್‌ಗಳು ಮೀರದಂತೆ |
| **ಸೇವಾನಿರತ ಅಭ್ಯರ್ಥಿಗಳಿಗೆ** | 400 ಮೀಟರ್ ಓಟ (ಪುರುಷ) | 2 ನಿಮಿಷ ಮೀರದಂತೆ |
| **ಮಾಜಿ ಸೈನಿಕ ಅಭ್ಯರ್ಥಿಗಳಿಗೆ** | 400 ಮೀಟರ್ ಓಟ | 2 ನಿಮಿಷ ಮೀರದಂತೆ |
| **ಮಹಿಳಾ ಅಭ್ಯರ್ಥಿಗಳಿಗೆ** | 400 ಮೀಟರ್ ಓಟ (ಮಹಿಳಾ) | 2 ನಿಮಿಷ ಮೀರದಂತೆ |
| **ಸೇವಾನಿರತ ಮಹಿಳಾ ಅಭ್ಯರ್ಥಿಗಳಿಗೆ** | 400 ಮೀಟರ್ ಓಟ | 2 ನಿಮಿಷ 30 ಸೆಕೆಂಡ್‌ಗಳು |

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

ಸಿ) **ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲಾತಿಗಳು:** i) ಲಿಖಿತ ಪರೀಕ್ಷೆಯ ಕರೆಪತ್ರ, ii) ಸಹಿಷ್ಣುತೆ, ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ, iv) ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ತರತಕ್ಕದ್ದು. ತಪ್ಪಿದ್ದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ಡಿ) **ಲಿಖಿತ ಪರೀಕ್ಷೆಯು ಪದವಿ ಮಟ್ಟದ ಎರಡು ಪತ್ರಿಕೆಗಳದ್ದಾಗಿರುತ್ತದೆ:**

**ಪತ್ರಿಕೆ–1 :** ಈ ಪತ್ರಿಕೆಯು ಎರಡು ಭಾಗಗಳನ್ನೊಳಗೊಂಡಿರುತ್ತದೆ. ಒಂದನೇ ಭಾಗವು ಕನ್ನಡ ಅಥವಾ ಇಂಗ್ಲೀಷ್‌ನಲ್ಲಿ ಪ್ರಬಂಧ ಬರೆಯುವುದು. ಇದಕ್ಕೆ 30 ಅಂಕಗಳು ಮತ್ತು ಎರಡನೇ ಭಾಗವು ವಾಕ್ಯಗಳನ್ನು ಕನ್ನಡ ಭಾಷೆಯಿಂದ ಇಂಗ್ಲೀಷ್ ಭಾಷೆಗೆ ಹಾಗೂ ಇಂಗ್ಲೀಷ್ ಭಾಷೆಯಿಂದ ಕನ್ನಡ ಭಾಷೆಗೆ ಭಾಷಾಂತರಿಸುವುದು, ಇದಕ್ಕೆ 20 ಅಂಕಗಳು. ಈ ಪರೀಕ್ಷೆಯ ಅವಧಿ ಒಂದು ಗಂಟೆಯಾಗಿದ್ದು, ಒಟ್ಟು 50 ಅಂಕಗಳನ್ನು ಹೊಂದಿರುತ್ತದೆ. (30 ಅಂಕಗಳು ಪ್ರಬಂಧಕ್ಕೆ ಮತ್ತು 20 ಅಂಕಗಳು ಭಾಷಾಂತರಕ್ಕೆ) ಇದರಲ್ಲಿ ಕನಿಷ್ಠ ಅಂಕಗಳು ಇರುವುದಿಲ್ಲ.

**ಪತ್ರಿಕೆ–2:** ಈ ಪ್ರಶ್ನೆ ಪತ್ರಿಕೆಯು ಸಾಮಾನ್ಯ ಅಧ್ಯಯನದ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ (i) ಸಾಮಾನ್ಯ ಜ್ಞಾನವು (ಎ) ವಿಜ್ಞಾನ (ಬಿ) ಭೂಗೋಳ (ಸಿ) ಆಧುನಿಕ ಭಾರತೀಯ ಇತಿಹಾಸ, ರಾಷ್ಟ್ರೀಯ ಸ್ವಾತಂತ್ರ್ಯ ಚಳುವಳಿ (ಡಿ) ಭಾರತೀಯ ಸಂವಿಧಾನದ ಮೂಲಭೂತ ಹಕ್ಕುಗಳು ಮತ್ತು ನಿರ್ದೇಶನಾತ್ಮಕ ತತ್ವಗಳನ್ನು ಒಳಗೊಂಡಿರುತ್ತದೆ. (ii) ಸಾಮಾನ್ಯ ಮಾನಸಿಕ ಸಾಮರ್ಥ್ಯವು (ಎ) ಗಣನಾ ಕೌಶಲ್ಯ (ಬಿ) ಪ್ರಾದೇಶಿಕ ಮನ್ನಣೆ ಕೌಶಲ್ಯ (ಸಿ) ಗ್ರಹಿಸುವಿಕೆ (ಡಿ) ತೀರ್ಮಾನ (ಇ) ನಿರ್ಧಾರ ತೆಗೆದುಕೊಳ್ಳುವ ಸಾಮರ್ಥ್ಯ (ಎಫ್) ನೈತಿಕ ಶಿಕ್ಷಣವನ್ನು ಒಳಗೊಂಡಿರುತ್ತದೆ. ಇದು ಬಹುವಿಧ ಆಯ್ಕೆಯ (Multiple Choice) ವಸ್ತುನಿಷ್ಠ (Objective) ಮಾದರಿಯದಾಗಿದ್ದು, ಒಂದು ನೂರ ಐವತ್ತು ಅಂಕಗಳ ಒಂದೂವರೆ ಗಂಟೆಯ ಪರೀಕ್ಷೆಯಾಗಿರುತ್ತದೆ. ಪ್ರತಿ ತಪ್ಪು ಉತ್ತರಕ್ಕೆ ಅಂತಹುದೇ ಪ್ರಶ್ನೆಯ ಸರಿ ಉತ್ತರದ 25% (.375) ರಷ್ಟು ಅಂಕಗಳನ್ನು ಕಳೆಯಲಾಗುವುದು. ಅಭ್ಯರ್ಥಿಗಳು ಎರಡು ಪತ್ರಿಕೆಗಳಿಗೂ ಹಾಜರಾಗುವುದು ಕಡ್ಡಾಯವಾಗಿರುತ್ತದೆ.

**ಲಿಖಿತ ಪರೀಕ್ಷೆಯ ಒಟ್ಟು ಅಂಕಗಳಲ್ಲಿ ಶೇಕಡ 30 ಕ್ಕಿಂತ ಕಡಿಮೆ ಅಂಕಗಳನ್ನು ಗಳಿಸುವ ಅಭ್ಯರ್ಥಿಯು ಅರ್ಹತಾ ಪಟ್ಟಿಯಲ್ಲಿ ಸೇರ್ಪಡೆಗೊಳ್ಳಲು ಅರ್ಹತೆ ಹೊಂದಿರುವುದಿಲ್ಲ.**

**ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆಗೊಳಪಟ್ಟಿರುತ್ತದೆ**

**ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಕೆಎಸ್‌ಐಎಸ್‌ಎಫ್) (ಪುರುಷ ಮತ್ತು ಮಹಿಳಾ ಹಾಗೂ ತೃತೀಯ ಲಿಂಗ) ಹಾಗೂ ಸೇವೆಯಲ್ಲಿರುವವರ (ಮಿಕ್ಕುಳಿದ)ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:**

**i)** ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಕೆಎಸ್‌ಐಎಸ್‌ಎಫ್) (ಪುರುಷ ಮತ್ತು ತೃತೀಯ ಲಿಂಗ) (ಮಿಕ್ಕುಳಿದ)–**41** ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ತೃತೀಯ ಲಿಂಗ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|
| ಸಾಮಾನ್ಯ ವರ್ಗ | 21 | 01 | 06 | 02 | 01 | 01 | 10 |
| ಪರಿಶಿಷ್ಟ ಜಾತಿ | 06 | - | 02 | - | 01 | 01 | 02 |
| ಪರಿಶಿಷ್ಟ ಪಂಗಡ | 01 | - | - | - | - | - | 01 |
| ಪ್ರವರ್ಗ–1 | 01 | - | - | 01 | - | - | - |
| ಪ್ರವರ್ಗ–2ಎ | 07 | - | 02 | - | 01 | 01 | 03 |
| ಪ್ರವರ್ಗ–2ಬಿ | 01 | - | - | 01 | - | - | - |
| ಪ್ರವರ್ಗ–3ಎ | 02 | - | 01 | 01 | - | - | - |
| ಪ್ರವರ್ಗ–3ಬಿ | 02 | - | - | - | - | - | 02 |
| **ಒಟ್ಟು** | **41** | **01** | **11** | **05** | **03** | **03** | **18** |

**ii)** ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಕೆಎಸ್‌ಐಎಸ್‌ಎಫ್) (ಮಹಿಳಾ ಮತ್ತು ತೃತೀಯ ಲಿಂಗ) (ಮಿಕ್ಕುಳಿದ)– **13** ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ತೃತೀಯ ಲಿಂಗ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|---|
| ಸಾಮಾನ್ಯ ವರ್ಗ | 07 | 01 | 02 | - | 01 | 01 | 02 |
| ಪರಿಶಿಷ್ಟ ಜಾತಿ | 02 | - | 01 | - | - | - | 01 |
| ಪರಿಶಿಷ್ಟ ಪಂಗಡ | - | - | - | - | - | - | - |
| ಪ್ರವರ್ಗ–1 | 01 | - | - | - | - | - | 01 |
| ಪ್ರವರ್ಗ–2ಎ | 02 | - | 01 | - | - | - | 01 |
| ಪ್ರವರ್ಗ–2ಬಿ | 01 | - | - | - | - | - | 01 |
| ಪ್ರವರ್ಗ–3ಎ | - | - | - | - | - | - | - |
| ಪ್ರವರ್ಗ–3ಬಿ | - | - | - | - | - | - | - |
| **ಒಟ್ಟು** | **13** | **01** | **04** | **-** | **01** | **01** | **06** |

